# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,
# ಬ್ಯಾಟರಾಯನಪುರ ಉಪ ವಿಭಾಗ, ವಾರ್ಡ್ ನಂ. 08(ಜಕ್ಕೂರು)
## ವಾರ್ಡ್‌ಸಮಿತಿ ಸಭೆ, ದಿನಾಂಕ: 23.09.2022 ರ
## ಸಭಾ ನಡುವಳಿ

ದಿನಾಂಕ: 23.09.2022 ರಂದು ಬೆಳ್ಳಿಗೆ 11.00 ಗಂಟೆಗೆ ವಾರ್ಡ್ ನಂ.08 ಜಕ್ಕೂರು ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ದಾಸರಹಳ್ಳಿ ಬಿಬಿಎಂಪಿ ಕಛೇರಿ ಆರಣದಲ್ಲಿ ನೆಡೆದ ವಾರ್ಡ್ ಸಮಿತಿಯ ಸಭೆಯ ನಡುವಳಿಗಳು

| ಕ್ರ.ಸಂ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1 | ಕೆ.ಎಲ್ ಗಂಗಾಧರಯ್ಯ | ಸಹಾಯಕ ನಿರ್ದೇಶಕರು, ನಗರ ಯೋಜನೆ, ಮತ್ತು ನೋಡಲ್ ಅಧಿಕಾರಿ, ವಾರ್ಡ್ ನಂ. 05(ಜಕ್ಕೂರು) ಹಾಗೂ |
| 2 | ವೈ.ಎನ್ ಮಹಂತೇಶ್ ಕುಮಾರ್ | ಕಾರ್ಯದರ್ಶಿಗಳು, ವಾರ್ಡ್ ಕಮಿಟಿ ವಾರ್ಡ್ ನಂ. 06 , ಮತ್ತು ಸಹಾಯಕ ಅಭಿಯಂತರರು |
| 3 | ರಾಜೇಶ್ ಹೆಚ್ | ಪಿ.ಎಸ್.ಐ, ಸಂಚಾರಿ ಪೋಲಿಸ್ ಠಾಣೆ, ಚಿಕ್ಕಜಾಲ |
| 4 | ಶ್ರೀ ಸೋಮಶೇಖರ್ | ವ್ಯವಸ್ಥಾಪಕರು, ಕಂದಾಯ ಉಪ ವಿಭಾಗ |
| 5 | ಶ್ರೀ ಮಲ್ಲಪ್ಪ | ಪಿ.ಎಸ್.ಐ ಸಂಪಿಗೇಹಳ್ಳಿ ಪೊಲೀಸ್ ಠಾಣೆ |
| 6 | ಶ್ರೀ ಜಿ. ವೆಂಕಟೇಶ್ | ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ. 08 |
| 7 | ಶ್ರೀ ಅಶ್ವಥ್ | ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ. 08 |
| 8 | ಶ್ರೀ ಮಂಜುನಾಥ್ | ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ. 08 |

ಶ್ರೀ ವೈ.ಎನ್ ಮಹಂತೇಶ್ ಕುಮಾರ್ ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಕಮಿಟಿ ಕಾರ್ಯದರ್ಶಿ ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ಅಧಿಕಾರಿಗಳು, ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಈ ಸಭೆಯಲ್ಲಿ ಚರ್ಚಿಸಬೇಕಾದ ಪ್ರಮುಖ ವಿಷಯಗಳ ಬಗ್ಗೆ ವಿವರಿಸುತ್ತಾ ಸದರಿ ಸಭೆಯ ಅಜೆಂಡ ವಿಷಯಗಳ ಬಗ್ಗೆ ತಿಳಿಸಿದರು.

1. ವಾರ್ಡ್‌ನ ಎಲ್ಲಾ ಸಾರ್ವಜನಿರಕು ಉಚಿತವಾಗಿ ಬೂಸ್ಟರ್ ಡೋಸ್ ಲಸಿಕೆಯನ್ನು ನೀಡುತ್ತಿದ್ದು ಸಂಬಂಧಪಟ್ಟ ಸರ್ಕಾರಿ ಆಸ್ಪತ್ರೆಗಳಲ್ಲಿ ಇದರ ಉಪಯೋಗ ಪಡೆದುಕೊಳ್ಳುವಂತೆ ಸಾರ್ವಜನಿಕರಿಗೆ ಅರಿವು ಮೂಡಿಸುವಂತೆ ಸಭೆಗೆ ತಿಳಿಸಿದರು ಹಾಗೂ ಡೆಂಗ್ಯೂ ಜ್ವರ ಹಾಗೂ ಚಿಕನ್‌ಗುನ್ಯ ಜ್ವರ ಹರಡುವ ಸಾಧ್ಯತೆಗಳೂ ಹೆಚ್ಚಾಗಿದ್ದು ಸಾರ್ವಜನಿಕರು ಮನೆಯ ಅಕ್ಕ ಪಕ್ಕ ನೀರು ನಿಲ್ಲುವ ಜಾಗವನ್ನು ಗುರುತಿಸಿ ನೀರು ನಿಲ್ಲದಂತೆ ಸ್ವಚ್ಛಗೊಳಿಸಿ ಶುದ್ಧವಾಗಿಟ್ಟುಕೊಳ್ಳುವುದು ಅವಶ್ಯಕವಾಗಿರುತ್ತದೆಂದು ಸಭೆಗೆ ತಿಳಿಸಿದರು.
2. ಬೀದಿ ದೀಪಗಳ ನಿರ್ವಹಣೆ ಬಗ್ಗೆ ವಾರ್ಡ್ ವ್ಯಾಪ್ತಿಯಲ್ಲಿ ಸಮರ್ಪಕ ನಿರ್ವಹಣೆ ಇರುವುದಿಲ್ಲವೆಂದು ಸಭೆಗೆ ತಿಳಿಸಿದರು. ಆಗೂ ವಾರ್ಡ್‌ನ ಹಲವಾರು ಕಡೆಗಳಲ್ಲಿ ಬೀದಿ ದೀಪ ನಿರ್ವಹಣೆಯ ಗುತ್ತಿಗೆದಾರರ ದೂರವಾಣಿ ಸಂಖ್ಯೆಯನ್ನು ಪ್ರದರ್ಶನ ಮಾಡುವಂಥೆ ಸೂಚನೆ ನೀಡಲಾಗಿರುತ್ತದೆ
3. ವಾರ್ಡ್ ನಂ. 08ರ ವ್ಯಾಪ್ತಿಯಲ್ಲಿ ವಾರ್ಡ್ ಕಛೇರಿ ನಿರ್ಮಾಣಕ್ಕೆ ಸ್ಥಳಾವಕಾಶ ಇಲ್ಲದೇ ಇರುವುದರಿಂದ ಬಾಡಿಗೆಗೆ ಪಡೆದು ವಾರ್ಡ್ ಕಛೇರಿ ಪ್ರಾರಂಬಿಸುವಂತೆ ಸಭೆಯಲ್ಲಿ ಚರ್ಚಿಸಲಯಿತು.



Scanned by CamScanner

4. ಘನತ್ಯಾಜ್ಯ ನಿರ್ವಹಣೆ ಬಗ್ಗೆ. ಅಶ್ವಥ್ ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಹೆಚ್ಚುವರಿ ಒಣ ಕಸ ಸಂಗ್ರಹಿಸಲು ಹೆಚ್ಚುವರಿ ಆಟೋ ಮತ್ತು ಪೌರಕಾರ್ಮಿಕರನ್ನು ನೇಮಿಸಲು ಕೋರಿದರು ಹಾಗೂ ಬ್ಲಾಕ್ ಸ್ಪಾಟ್‌ಗಳ ಸ್ಥಳಗಳಲ್ಲಿ ಸೌಂದರೀಕರಣ ಮಾಡಲು ಬೇಕಾದ ಸಾಮಗ್ರಿಗಳನ್ನು ಒದಗಿಸುವಂತೆ ಹಾಗೂ ವಾರ್ಡ್ ವ್ಯಾಪ್ತಿಗೆ ಹೆಚ್ಚುವರಿ ಪೌರಕಾರ್ಮಿಕರನ್ನು ಒದಗಿಸುವಂಥೆ ಕೋರಿರದರು.
5. ವಾರ್ಡ್ ವ್ಯಾಪ್ತಿಯ ಎಂ.ಸಿ.ಇ.ಸಿ.ಹೆಚ್.ಎಸ್ ಬಡಾವಣೆ– ರಾಚೇನಹಳ್ಳಿಗೆ ಸಂಪರ್ಕ ಕಲ್ಪಿಸುವ ರಸ್ತೆಯಲ್ಲಿ ರೈಲ್ವೆ ಅಂಡರ್ ಪಾಸ್ ಹತ್ತಿರ ಮಳೆ ನೀರು ಶೇಖರಣೆಗೊಂಡು ಸಾರ್ವಜನಿಕರು ಓಡಾಟಕ್ಕೆ ತೊಂದರೆಯಾಗುತ್ತಿರುವುದರಿಂದ ಇದನ್ನು ಸರಿಪಡಿಸುವಂತೆ ಸಾರ್ವಜನಿಕರು ಕೋರಿದರು. ಈ ಬಗ್ಗೆ ಅದ್ಯಕ್ಷರು ಸಂಬಂಧಪಟ್ಟ ಅಭಿಯಂತರರಿಗೆ ಸೂಚನೆ ನೀಡಿ ಕೂಡಲೇ ಕ್ರಮ ವಹಿಸುವಂತೆ ಕೋರಿದರು.
6. ವಾರ್ಡ್ ವ್ಯಾಪ್ತಿಯಲ್ಲಿ ವಾರ್ಡ್ ಕಛೇರಿ ನಿರ್ಮಾಣಕ್ಕೆ ಅನುಕೂಲವಾಗುವಂತೆ ಪಾಲಿಕೆಯ ಜಾಗವನ್ನು ಗುರುತಿಸಲು ಚರ್ಚಿಸಿ ಸಂಬಂಧಪಟ್ಟ ಅಧಿಕಾರಿಗಳಿಗೆ ಕ್ರಮ ವಹಿಸಲು ಸೂಚನೆ ನೀಡಲಾಯಿತು.
7. ವಾರ್ಡ್ ವ್ಯಾಪ್ತಿಯ ಕೆಲವು ಕಡೆಗಳಲ್ಲಿ ಬೀದಿ ನಾಯಿಗಳ ಹಾವಳಿ ಹೆಚ್ಚಾಗಿದ್ದು ಸಂಬಂಧಪಟ್ಟವರು ಕ್ರಮ ವಹಿಸುವಂತೆ ಸಾರ್ವಜನಿಕರು ಕೋರಿದರು.
8. ವಾರ್ಡ್ ವ್ಯಾಪ್ತಿಯಲ್ಲಿ ಬರುವ ಬಿ.ಡಿ.ಎ ಬಡಾವಣೆಗಳಲ್ಲಿ ಸಾರ್ವಜನಿಕರ ಉದ್ದೇಶಕ್ಕಾಗಿ ಮೀಸಲಿಟ್ಟಿರುವ ಉದ್ಯಾನವನಗಳು, ಸಿ.ಎ ನಿವೇಶನಗಳನ್ನು ಪಾಲಿಕೆಗೆ ಹಸ್ತಾಂತರ ಮಾಡಿಕೊಳ್ಳುವಂತೆ ಸಭೆಯಲ್ಲಿ ಚರ್ಚಿಸಿ ಈ ಬಗ್ಗೆ ಕ್ರಮ ವಹಿಸಲು ಸಂಬಂಧಪಟ್ಟ ಅಭಿಯಂತರರಿಗೆ ಸೂಚನೆ ನೀಡಲಾಯಿತು.

ಕೊನೆಯದಾಗಿ ಮಾನ್ಯ ನೋಡೆಲ್ ಅಧಿಕಾರಿಗಳು, ವಾರ್ಡ್ ಸಮಿತಿ ರವರು ಮಾತನಾಡಿ ಈವರೆವಿಗೂ ಸಭೆಯಲ್ಲಿ ಚರ್ಚಿಸಿರುವ ಎಲ್ಲಾ ವಿಷಯಗಳನ್ನು ಗಂಬೀರವಾಗಿ ಪರಿಗಣಿಸಿ ಸಂಬಂಧಪಟ್ಟ ಎಲ್ಲಾ ಇಲಾಖೆಯ ಅಧಿಕಾರಿಗಳು ಕ್ರಮ ವಹಿಸುವಂಥೆ ಸೂಚಿಸಿದರು ಹಾಗೂ ಕೋವಿಡ್–19ರ ಸಂಬಂಧ ಮೇಲಾಧಿಕಾರಿಗಳಿಂದ ಬರುವ ಸೂಚನೆ ಮತ್ತು ಆದೇಶಗಳನ್ನು ನಿಯಮಾಸುಸಾರ ಪಾಲಿಸುವಂಥೆ ಹಾಗೂ ಕಾರ್ಯರೂಪಕ್ಕೆ ತರಲು ಕಾರ್ಯೋನ್ಮುಖರಾಗುವಂತೆ ಸೂಚಿಸುತ್ತಾ ಮುಂದಿನ ಸಭೆಗೆ ಕಡ್ಡಾಯವಾಗಿ ಎಲ್ಲಾ ವಿಭಾಗದ ಅಧಿಕಾರಿಗಳು ಸಭೆಯಲ್ಲಿ ಹಾಜರಿರುವಂಥೆ ಕ್ರಮ ವಹಿಸಲು ಸೂಚಿಸುತ್ತಾ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್‌ಸಮಿತಿ, ವಾರ್ಡ್ ನಂ. 08(ಜಕ್ಕೂರು)

ನೋಡಲ್ ಅಧಿಕಾರಿಗಳು
ವಾರ್ಡ್ ಸಮಿತಿ, ವಾರ್ಡ್ ನಂ. 08, (ಜಕ್ಕೂರು)

ಪ್ರತಿಯನ್ನು.

1. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಜಂಟಿಆಯುಕ್ತರು, ಯಲಹಂಕ ವಲಯರವರಿಗೆ ಅವಗಾಹನೆಗೆ ಸಲ್ಲಿಸಿದೆ.
3. ಮುಖ್ಯಅಭಿಯಂತರರು, ಯಲಹಂಕ ವಲಯರವರಿಗೆ ಅವಗಾಹನೆಗೆ ಸಲ್ಲಿಸಿದೆ.
4. ಕಂದಾಯ ಅಧಿಕಾರಿಗಳು (ಯಲಹಂಕ) ಬೆಂಗಳೂರು ರವರ ಅವಗಾಹನೆಗೆ ಸಲ್ಲಿಸಿದೆ.
5. ಕಾರ್ಯಪಾಲಕಅಭಿಯಂತರರು, ಬ್ಯಾಟರಾಯನಪುರ ವಿಭಾಗರವರಿಗೆ ಸಲ್ಲಸಿದೆ
6. ಕಛೇರಿಕಡತಕ್ಕೆ.



Scanned by CamScanner